# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 12.07.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಜೆ.ಸಿ. ರಸ್ತೆಯ ಕುಂಬಾರಗುಂಡಿ ಪ್ರದೇಶದ ಬೃಹತ್ ನೀರುಗಾಲುವೆಯನ್ನು ಒತ್ತುವರಿ ಮಾಡಿಕೊಂಡು ನಿರ್ಮಿಸಲಾದ 3 ಅಂತಸ್ತಿನ ವಾಣಿಜ್ಯ ಕಟ್ಟಡವನ್ನು ಪಾಲಿಕೆ ಇಂದು ಒಡೆದು ತೆರವುಗೊಳಿಸಿದೆ.

ಈ ಕಟ್ಟಡವನ್ನು 35 ವರ್ಷಗಳ ಹಿಂದೆ ಪಾಲಿಕೆಯಿಂದ ನಿರ್ಮಿಸಲಾಗಿತ್ತು. ಅದನ್ನು ಭೋಗ್ಯದ ಆಧಾರದ ಮೇಲೆ 30 ವರ್ಷಗಳವರೆಗೆ ಬಾಡಿಗೆಗೆ ನೀಡಲಾಗಿತ್ತು. 4 ವರ್ಷಗಳ ಹಿಂದೆ ಭೋಗ್ಯದ ಅವಧಿ ಮುಗಿದಿದ್ದರೂ ಅಂಗಡಿ ಬಾಡಿಗೆದಾರರು ಕಟ್ಟಡವನ್ನು ತೆರವುಗೊಳಿಸಿರಲಿಲ್ಲ. ಇದರಲ್ಲಿ 15 ಅಂಗಡಿಗಳು ಮತ್ತು 2 ದೊಡ್ಡ ಗೋಡೌನ್‌ಗಳಿದ್ದವು.

ಇತ್ತೀಚೆಗೆ ಕರ್ನಾಟಕ ಉಚ್ಛ ನ್ಯಾಯಾಲಯವು ಬಿಬಿಎಂಪಿಗೆ ಬೃಹತ್ ನೀರುಗಾಲುವೆ ಒತ್ತುವರಿಯನ್ನು ನಿರ್ದಾಕ್ಷಿಣ್ಯವಾಗಿ ತೆರವುಗೊಳಿಸಲು ಸೂಚಿಸಿರುವ ಹಿನ್ನೆಲೆಯಲ್ಲಿ ಪಾಲಿಕೆ ಇಂದು ದಿಢೀರನೆ ಕಾರ್ಯಾಚರಣೆ ನಡೆಸಿ, ಜೆ.ಸಿ.ಬಿ ಮತ್ತು ಗ್ಯಾಸ್‌ಕಟರ್‌ಗಳನ್ನು ಬಳಸಿ, ಬಿ.ಎಂ.ಟಿ.ಎಫ್. ಸಿಬ್ಬಂದಿ ಸಹಾಯದೊಂದಿಗೆ ತೆರವುಗೊಳಿಸಿದೆ. ಇದರಿಂದ ಈ ಪ್ರದೇಶದಲ್ಲಿ ಮಳೆ ಬಂದಾಗ ಬೃಹತ್ ನೀರುಗಾಲುವೆಯಿಂದ ನೀರು ಉಕ್ಕಿ ಹರಿದು ಪ್ರವಾಹ ಉಂಟಾಗುವುದನ್ನು ತಡೆಗಟ್ಟಬಹುದಾಗಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 12.07.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಲ್ಲೇಶ್ವರಂ ಸಂಪಿಗೆ ರಸ್ತೆಯಲ್ಲಿರುವ ಜೈಭೀಮಾನಗರ ಕೊಳಚೆ ಪ್ರದೇಶದಲ್ಲಿ ಇರುವ 21 ಮನೆಗಳನ್ನು ಪಾಲಿಕೆ ಇಂದು ನೆಲಸಮಗೊಳಿಸಿ, ರೂ.20.00 ಕೋಟಿ ಆಸ್ತಿಯನ್ನು ವಶಕ್ಕೆ ತೆಗೆದುಕೊಂಡಿದೆ.

ಈ ನಿವಾಸಿಗಳು ಕಳೆದ ಹತ್ತು ವರ್ಷಗಳಿಂದ ಇಲ್ಲಿ ವಾಸವಾಗಿದ್ದರು. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ನೇತೃತ್ವದ ಉನ್ನತ ಅಧಿಕಾರಿಗಳ ಸಮಿತಿ ಸೂಚನೆಯಂತೆ ಬಿಬಿಎಂಪಿ ಒಂದು ವಾರದ ಹಿಂದೆ ಮನೆಗಳನ್ನು ತೆರವುಗೊಳಿಸಲು ನೋಟೀಸ್ ಜಾರಿ ಮಾಡಲಾಗಿತ್ತು. ಈ ನಿವಾಸಿಗಳಿಗೆ ಪೀಣ್ಯಾ ಬಡಾವಣೆಯಲ್ಲಿ ನಿರ್ಮಿಸಲಾದ ಮನೆಗಳಿಗೆ ಸ್ಥಳಾಂತರಗೊಳ್ಳುವಂತೆ ಸೂಚನೆ ನೀಡಲಾಗಿತ್ತು.

ಆದರೂ ಕೂಡಾ ನಿವಾಸಿಗಳು ಸ್ಥಳಾಂತರಗೊಳ್ಳದೇ ಇರುವುದರಿಂದ ಬಿಬಿಎಂಪಿ ಇಂದು ಕಾರ್ಯಾಚರಣೆ ನಡೆಸಿ, 21 ಮನೆಗಳನ್ನು ನೆಲಸಮಗೊಳಿಸಿ, ಆಸ್ತಿಯನ್ನು ಪಾಲಿಕೆ ವಶಕ್ಕೆ ತೆಗೆದುಕೊಂಡಿದೆ.

ಈ ಹಿಂದೆ ಈ ಸ್ಥಳದಲ್ಲಿ 103 ಮನೆಗಳು ಇದ್ದವು. ಅದರಲ್ಲಿ 82 ನಿವಾಸಿಗಳ ಮನೆಗಳನ್ನು ತೆರವುಗೊಳಿಸಿ, ಪೀಣ್ಯಕ್ಕೆ ಸ್ಥಳಾಂತರಗೊಳಿಸಲಾಗಿತ್ತು. 21 ನಿವಾಸಿಗಳು ಸ್ಥಳಾಂತರಗೊಳ್ಳದೇ ಇರುವುದರಿಂದ ಇಂದು ತೆರವುಗೊಳಿಸಲಾಯಿತು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002

***ಪತ್ರಿಕಾ ಪ್ರಕಟಣೆ*** **ದಿನಾಂಕ: 12.07.2011**

ಇಂದು ಕೆ.ಆರ್.ಪುರಂ ವಿಧಾನಸಭಾ ಕ್ಷೇತ್ರದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾದ ಶ್ರೀಮತಿ ಶಾರದಮ್ಮ ರವರು, ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ ಮತ್ತು ಆಯುಕ್ತರಾದ ಶ್ರೀ ಸಿದ್ದಯ್ಯ ರವರೊಂದಿಗೆ ಜನಸ್ಪಂದನಾ ಕಾರ್ಯಕ್ರಮವನ್ನು ಕೆ.ಆರ್.ಪುರಂನಲ್ಲಿರುವ ಐ.ಟಿ.ಐ. ಕಾಲೋನಿಯ ಐ.ಟಿ.ಐ. ಆಡಿಟೋರಿಯಂನಲ್ಲಿ ನಡೆಸಿ, ಸ್ಥಳೀಯರ ಕುಂದುಕೊರತೆಗಳನ್ನು ಆಲಿಸಿದರು.

ಪೂಜ್ಯ ಮಹಾಪೌರರು ಮಾತನಾಡಿ, ಈ ಜನಸ್ಪಂದನಾ ಕಾರ್ಯಕ್ರಮವು ಸಾರ್ವಜನಿಕರಿಗೆ ತುಂಬಾ ಉಪಯುಕ್ತವಾಗಿದೆ. ಇಲ್ಲಿ ಅಧಿಕಾರಿಗಳೇ ನೇರವಾಗಿ ಜನರ ಹತ್ತಿರ ಬಂದು ಸ್ಥಳೀಯರ ಸಮಸ್ಯೆಗಳನ್ನು ಆಲಿಸಿ, ಸೂಕ್ತ ಪರಿಹಾರ ಕೈಗೊಳ್ಳುತ್ತಾರೆ. ಆದ್ದರಿಂದ ಸಾರ್ವಜನಿಕರು ತಮ್ಮ ಬೇಡಿಕೆಗಳು ಹಾಗೂ ಕುಂದುಕೊರತೆಗಳನ್ನು ಬಗೆಹರಿಸಿಕೊಳ್ಳಬಹುದು. ಹಾಗೂ ಇನ್ನುಮುಂದೆ ಈ ಜನಸ್ಪಂದನಾ ಕಾರ್ಯಕ್ರಮವನ್ನು ನಗರದ ಎಲ್ಲಾ 28 ವಿಧಾನಸಭಾ ಕ್ಷೇತ್ರಗಳಲ್ಲಿಯೂ ಹಂತ ಹಂತವಾಗಿ ಕೈಗೊಂಡು, ಸಾರ್ವಜನಿಕರ ಕುಂದುಕೊರತೆಗಳನ್ನು ಬಗೆಹರಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ ರವರು ಮಾತನಾಡಿ, ಬೆಂಗಳೂರು ಮಹಾನಗರ ಪಾಲಿಕೆಯಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಾಗಿ ರಚನೆಯಾದ ನಂತರ ಇದೇ ಮೊಟ್ಟಮೊದಲ ಬಾರಿಗೆ ಜನಸ್ಪಂದನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿರುವುದು ಸಂತೋಷದ ವಿಷಯ. ನಗರವು ಮೊದಲು 200 ಕಿ.ಮೀ. ವ್ಯಾಪ್ತಿಯಿಂದ 800 ಕಿ.ಮೀ. ಆಗಿರುವುದರಿಂದ ಇನ್ನೂ ಹೆಚ್ಚಿನ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವುದು ನಮ್ಮ ಜವಾಬ್ದಾರಿಯಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಕಾರ್ಯಕ್ರಮದಲ್ಲಿ ವಿಜನಾಪುರ, ರಾಮಮೂರ್ತಿನಗರ, ಕೆ.ಆರ್. ಪುರ ಸೇರಿದಂತೆ ವಿವಿಧ ವಾರ್ಡ್‌ಗಳಲ್ಲಿ ನೀರಿನ ಸಮಸ್ಯೆ ಇರುವುದನ್ನು ನಾಯಕರ ಗಮನಕ್ಕೆ ತಂದ ಮಹಿಳೆಯರು ನಾಲ್ಕು ಸಾವಿರ ಹಣ ನೀಡಿ ನೀರು ಖರೀದಿಸುವ ಮೂಲಕ ಜೀವನ ನಿರ್ವಹಣೆ ಮಾಡಲಾಗುತ್ತಿದೆ. ಆದ್ದರಿಂದ ಕೂಡಲೇ ನೀರಿನ ಸಮಸ್ಯೆಯನ್ನು ಬಗೆಹರಿಸಬೇಕೆಂದು ಮನವಿ ಸಲ್ಲಿಸಿದರು. ಇದಕ್ಕೆ ಸ್ಪಂದಿಸಿದ ಶಾಸಕರಾದ ಶ್ರೀ ಎನ್.ಎಸ್. ನಂದೀಶ್ ರೆಡ್ಡಿ ರವರು ಮಾತನಾಡಿ, ನೀರು ಪೂರೈಸುವ ಪ್ರಗತಿ ಪಾಲಿಕೆ ಮುಂದಿದ್ದು, ತಕ್ಷಣವೇ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಭರವಸೆ ನೀಡಿದರು.

ತಮ್ಮ ವಾರ್ಡ್‌ಗಳಲ್ಲಿ ಕಸದ ರಾಶಿ ಬಿದ್ದಿದ್ದು, ಅವುಗಳ ತೆರವಿಗೆ ಪಾಲಿಕೆಗೆ ಅರ್ಜಿ ಸಲ್ಲಿಸಿದ್ದರು ಇದುವರೆಗೂ ಅಧಿಕಾರಿಗಳು ಸ್ಪಂದಿಸಿಲ್ಲ. ಇದರಿಂದ ಸೊಳ್ಳೆ, ನೊಣಗಳು ಉತ್ಪತ್ತಿಯಾಗಿ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆಯಿದೆ ಎಂದು ಸ್ಥಳೀಯ ನಿವಾಸಿಗಳು ತಮ್ಮ ದೂರನ್ನು ಸಲ್ಲಿಸಿದರು.

ಕೆಲವು ಸಾರ್ವಜನಿಕರು ಮಾತನಾಡಿ, ಹೊಸ ಕಟ್ಟಡ ನಿರ್ಮಿಸಲು ಕಂದಾಯ ಪಾವತಿಸಿಕೊಂಡಿದ್ದರೂ ಪರವಾನಗಿ ನೀಡಲು ಹಿಂದೇಟು ಹಾಕುತ್ತಿರುವುದು ಏಕೆ ಎಂದು ಪಾಲಿಕೆ ಆಯುಕ್ತರನ್ನು ಪ್ರಶ್ನಿಸಿದರು.

ಇದಕ್ಕೆ ಸ್ಪಂದಿಸಿದ ಆಯುಕ್ತರು ಹೊಸ ಕಟ್ಟಡಕ್ಕೆ ಬಿ ಖಾತೆ ಎಂದು ಕೊಡುತ್ತೇವೆ. ಲೇಔಟ್ ಬದಲಾವಣೆ ಮಾಡಿಕೊಳ್ಳಬೇಕು ಇಲ್ಲದಿದ್ದರೆ ಪಾಲಿಕೆಯಿಂದ ಅನುಮತಿ ನೀಡುವುದು ಕಷ್ಟವಾಗುತ್ತದೆ. ಈ ಸಂಬಂಧ ಸೂಕ್ತ ಪರಿಹಾರಕ್ಕಾಗಿ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ, ಕಾನೂನನ್ನು ಜಾರಿಗೆ ತರಲು ಒತ್ತಾಯಿಸುವುದಾಗಿ ಭರವಸೆ ನೀಡಿದರು.

ಸ್ಥಳೀಯ ನಿವಾಸಿಯಾದ ಪಾಪಣ್ಣ ಮಾತನಾಡಿ, ನಮ್ಮ ವ್ಯಾಪ್ತಿಯಲ್ಲಿ ಸುಮಾರು 20 ಹಸುಗಳು ಕಳ್ಳತನವಾಗಿದ್ದು, ರಾತ್ರಿ ವೇಳೆ ಹಸುಗಳನ್ನು ಕಳ್ಳತನ ಮಾಡಿ ಕಸಾಯಿ ಖಾನೆಗೆ ಸಾಗಿಸಿ, ರಾತ್ರಿಯೇ ಕತ್ತರಿಸುತ್ತಿದ್ದಾರೆ. ಪೊಲೀಸರು ಈ ಬಗ್ಗೆ ನಿರ್ಲಕ್ಷಿಸುತ್ತಿರುವುದಾಗಿ ತಮ್ಮ ಅಳಲನ್ನು ತೋಡಿಕೊಂಡು, ಸಾರ್ವಜನಿಕ ಸ್ಥಳದಿಂದ ಕಸಾಯಿ ಖಾನೆಯನ್ನು ತೆಗೆದು ಪ್ರತ್ಯೇಕ ಸ್ಥಳದಲ್ಲಿ ನಿರ್ಮಿಸಬೇಕೆಂದು ಮನವಿ ಸಲ್ಲಿಸಿದರು. ಅದಕ್ಕೆ ಆಯುಕ್ತರು ಮಾತನಾಡಿ, ಪಾಲಿಕೆಯಿಂದ ಆಧುನಿಕ ಕಸಾಯಿಖಾನೆ ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಹದೇವಪುರ ವಲಯದ ಜಂಟಿ ಆಯುಕ್ತರಾದ ಶ್ರೀ ದೇವರಾಜ್, ಸ್ಥಳೀಯ ಪಾಲಿಕೆಯ ಸದಸ್ಯರುಗಳಾದ ಶ್ರೀಮತಿ ತೇಜಸ್ವಿನಿ ಎನ್. ರಾಜು, ಶ್ರೀ ಸುಗುಮಾರ್ ಹಾಗೂ ಮುಂತಾದವರು ಭಾಗವಹಿಸಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 12.07.2011**

## ***ಶ್ರೀರಾಮಮಂದಿರದ ಆಟದ ಮೈದಾನದಲ್ಲಿ ರಂಗಮಂದಿರ ನಿರ್ಮಾಣ ಕಾಮಗಾರಿ ಅಕ್ಟೋಬರ್‌ಗೆ ಪೂರ್ಣ***

ಇಂದು ರಾಜಾಜಿನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಪಾಲಿಕೆಯಿಂದ ಹಮ್ಮಿಕೊಳ್ಳಲಾದ ತೀವ್ರ ಸ್ವಚ್ಛತಾ ಕಾರ್ಯಕ್ರಮದಲ್ಲಿ ಸಚಿವರಾದ ಶ್ರೀ ಎಸ್.ಸುರೇಶ್ ಕುಮಾರ್ ರವರು ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ರವರೊಂದಿಗೆ ಭಾಗವಹಿಸಿ, ಶ್ರೀರಾಮಮಂದಿರ ಆಟದ ಮೈದಾನದಲ್ಲಿ ನಿರ್ಮಿಸಲಾಗುತ್ತಿರುವ ರಂಗಮಂದಿರ ಕಟ್ಟಡದ ಕಾಮಗಾರಿಯನ್ನು ಪರಿಶೀಲಿಸಿದರು.

ಸುಮಾರು ರೂ.1.25 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಈ ರಂಗಮಂದಿರ ಕಟ್ಟಡವು ನಿಧಾನಗತಿಯಲ್ಲಿ ಸಾಗುತ್ತಿರುವುದಕ್ಕೆ ತುಂಬಾ ಬೇಸರ ವ್ಯಕ್ತಪಡಿಸಿದ ಸಚಿವರು ವಿಳಂಬಕ್ಕೆ ಕಾರಣವೇನೆಂದು ಗುತ್ತಿಗೆದಾರರನ್ನು ಪ್ರಶ್ನಿಸಿದರು. ಅದಕ್ಕೆ ಗುತ್ತಿಗೆದಾರರು ಸಮರ್ಪಕವಾಗಿ ಉತ್ತರ ನೀಡಲು ತಡಬಡಿಸಿ, ಇನ್ನೂ ಸೆಪ್ಟೆಂಬರ್ ಒಳಗೆ ಕಾಮಗಾರಿಯನ್ನು ಪೂರ್ಣಗೊಳಿಸುವುದಾಗಿ ತಿಳಿಸಿದರು.

ಗುತ್ತಿಗೆದಾರರನ್ನು ತರಾಟೆಗೆ ತೆಗೆದುಕೊಂಡ ಸಚಿವರು ಸದರಿ ರಂಗಮಂದಿರ ಕಟ್ಟಡದ ಕಾಮಗಾರಿಯನ್ನು ಅಕ್ಟೋಬರ್ ತಿಂಗಳ ಒಳಗೆ ಪೂರ್ಣಗೊಳಿಸಲು ಗಡುವು ನೀಡಿದರು. ಅಷ್ಟರಲ್ಲಿ ಸಾರ್ವಜನಿಕ ಸೇವೆಗೆ ಮುಕ್ತಗೊಳಿಸಬೇಕು ಇಲ್ಲದಿದ್ದರೆ ಭಾರೀ ಪ್ರಮಾಣದ ದಂಡ ವಿಧಿಸುವುದಾಗಿ ಎಚ್ಚರಿಸಿದರು.

ತದನಂತರ ಭಾಷ್ಯಂ ವೃತ್ತದಿಂದ ಶಿವನಗರಕ್ಕೆ ತೆರಳುವ ಮಾರ್ಗದ 59ನೇ ಅಡ್ಡರಸ್ತೆಯ ಬಳಿ ಫೆಡರಲ್ ಬ್ಯಾಂಕ್ ಕಟ್ಟಡದ ಮಾಲೀಕರು ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡಿರುವುದನ್ನು ಪರಿಶೀಲಿಸಿದ ಆಯುಕ್ತರು ಕಟ್ಟಡದ ಮಾಲೀಕರಿಗೆ ರೂ.1.00 ಲಕ್ಷ ದಂಡ ವಿಧಿಸುವಂತೆ ಸ್ಥಳದಲ್ಲಿ ಹಾಜರಿದ್ದ ಪಾಲಿಕೆಯ ಅಧಿಕಾರಿಗಳಿಗೆ ಆದೇಶಿಸಿದರು.

ನಂತರ ಬಸವೇಶ್ವರನಗರ ವಾರ್ಡ್‌ನ ನೇತಾಜಿ ಸುಭಾಷ್ ಚಂದ್ರ ಬೋಸ್ ಆಟದ ಮೈದಾನದಲ್ಲಿ ನಿರ್ಮಿಸುತ್ತಿರುವ ಕಿರು ಅರಣ್ಯಕ್ಕೆ ಭೇಟಿ ನೀಡಿ, ಸ್ವತಃ ಆಯುಕ್ತರೇ ಕೆಲವು ಸಸಿಗಳನ್ನು ನೆಟ್ಟು ಹಾಳಾಗಿರುವ ಗಿಡಗಳ ಬದಲಿಗೆ ಬೇರೆ ಸಸಿ ನೆಡುವಂತೆ ಅರಣ್ಯ ಅಧಿಕಾರಿಗಳಿಗೆ ಆದೇಶಿಸಿದರು. ಅಲ್ಲದೇ ಕಿರು ಅರಣ್ಯಕ್ಕೆ ಸೂಕ್ತ ನೀರಿನ ವ್ಯವಸ್ಥೆ ಕಲ್ಪಿಸಿ, ಈ ಭಾಗದ ಮಾದರಿಯನ್ನಾಗಿ ಮಾಡಿ ಅದಕ್ಕೆ ತಗಲುವ ವೆಚ್ಚವನ್ನು ಪಾಲಿಕೆಯೇ ಭರಿಸಲಿದೆ ಎಂದು ಭರವಸೆ ನೀಡಿದರು.

ಮಹದೇವ ಬಣಕಾರ್ ಉದ್ಯಾನವನಕ್ಕೆ ಭೇಟಿ ನೀಡಿ, ಅಲ್ಲಿನ ನಿರ್ವಹಣೆಯನ್ನು ಪರಿಶೀಲಿಸಿ, ಕೆಟ್ಟು ಹೋಗಿದ್ದ ನೀರಿನ ಕಾರಂಜಿಯನ್ನು ಸಂಜೆ ವೇಳೆಗೆ ದುರಸ್ಥಿಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಿದರು. ಬಂಡೆಗಳನ್ನು ಹೊಂದಿಕೊಂಡಿರುವ ಈ ಉದ್ಯಾನವನ ಮಳೆ ನೀರು ಕೊಯ್ಲು ಘಟಕಗಳನ್ನು ಸ್ಥಾಪಿಸಲು ಸೂಕ್ತವಾಗಿದೆ. ಇಲ್ಲಿ ಹೆಚ್ಚು ಮಳೆ ನೀರು ಕೊಯ್ಲು ಘಟಕಗಳನ್ನು ಸ್ಥಾಪಿಸುವಂತೆ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಆಯುಕ್ತರು ಸೂಚಿಸಿದರು.

ರಾಜಾಜಿನಗರ 5ನೇ ಬ್ಲಾಕ್‌ನ 13, 14 ಮತ್ತು 15ನೇ ಅಡ್ಡರಸ್ತೆಗಳಲ್ಲಿಯೂ ಸಹ ಸ್ವಚ್ಛತಾ ಕಾರ್ಯಕ್ರಮವನ್ನು ಕೈಗೊಂಡು, ಮೋರಿಗಳ ಹೂಳೆತ್ತುವುದು, ಪಾದಚಾರಿ ಮಾರ್ಗಗಳ ಮೇಲಿದ್ದ ಅವಶೇಷಗಳನ್ನು ತೆರವುಗೊಳಿಸಲಾಯಿತು.

ಈ ಸಂದರ್ಭದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಶ್ರೀ ಹೆಚ್.ಆರ್. ಕೃಷ್ಣಪ್ಪ, ಪಾಲಿಕೆ ಸದಸ್ಯರುಗಳಾದ ಶ್ರೀ ಪದ್ಮರಾಜ್, ಶ್ರೀಮತಿ ಜಯರತ್ನ, ಮತ್ತಿತರರು ಉಪಸ್ಥಿತರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 12.07.2011**

ಕರ್ನಾಟಕದ ಉಚ್ಛ ನ್ಯಾಯಾಲಯದ ಆದೇಶದಂತೆ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ ಇಟ್ಟುಮಡು ಗ್ರಾಮದ ಸರ್ವೆ ನಂ.29 ಮತ್ತು 30 ರಲ್ಲಿ ಹಾದುಹೋಗುವ ಬೃಹತ್ ನೀರುಗಾಲುವೆಯನ್ನು ಒತ್ತುವರಿ ಮಾಡಿಕೊಂಡು ನಿರ್ಮಿಸಿರುವ ಕಟ್ಟಡಗಳಲ್ಲಿನ ಒತ್ತುವರಿ ಭಾಗಗಳನ್ನು ಸರ್ವೆ ಮಾಡಿ ಗುರುತು ಮಾಡಿಸಿದ್ದು, ಸದರಿ ಭಾಗಗಳ ತೆರವುಗೊಳಿಸುವ ಕಾರ್ಯಾಚರಣೆಯನ್ನು ದಿನಾಂಕ: 13.07.2011 ರಂದು ಬೆಳಿಗ್ಗೆ 8.00 ಗಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದು ಕಾರ್ಯಪಾಲಕ ಅಭಿಯಂತರರು (ಪದ್ಮನಾಭನಗರ) ವಿಭಾಗ ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**